ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ತುಂಗಭದ್ರ ಜಲಾಶಯಕ್ಕೆ ಪರ್ಯಾಯ ಜಲಾಶಯ ವ್ಯವಸ್ಥೆ ಕುರಿತು

ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) :-

682 (719) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರತಿ ವರ್ಷದಂತೆ ತುಂಗಭದ್ರ ಜಲಾಶಯದಲ್ಲಿ ಮಳೆಗಾಲದಲ್ಲಿ ನೀರು ತುಂಬಿ ಹರಿಯುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈಗಾಗಲೇ ಸದರಿ ಜಲಾಶಯದಲ್ಲಿ ಹೆಚ್ಚಿನ ನೀರು ಹರಿದು ಹೋಗುವುದನ್ನು ತಡೆದು ಸಂಗ್ರಹಿಸಲು ಪರ್ಯಾಯ ಜಲಾಶಯ ವ್ಯವಸ್ಥೆಯನ್ನು ನವಲಿ ಗ್ರಾಮದ ಹತ್ತಿರ ಮಾಡಲು ಉದ್ದೇಶಿಸಲಾಗಿದೆಯೇ;

(ಇ) ಹಾಗಿದ್ದಲ್ಲಿ, ಇದಕ್ಕಾಗಿ ಈ ವರ್ಷದ ಆಯವ್ಯಯದಲ್ಲಿ ಅನುದಾನವನ್ನು ಒದಗಿಸಲಾಗುವುದೇ ?